ಗುರುವಾರ 04.12.2025
ಬೆಂಗಳೂರು, ಬೆಲೆ: 5ರೂ,
2 ಪುಟಗಳು
ಸಂಪುಟ 01 - ಸಂಚಿಕೆ 115
Digital Varthe Kannada Daily
Volume 01 - Issue 115
Thursday 04.12.2025
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ

ಕನ್ನಡ ದಿನಪತ್ರಿಕೆ

DIGITAL VARTHE

digitalvarthe@gmail.com
www.digitalvarthe.com

## ಕಬ್ಬು ತುಂಬಿದ ಟ್ರ್ಯಾಕ್ಟರ್‌ಗೆ ಹಿಂಬದಿಯಿಂದ ಕಾರು ಡಿಕ್ಕಿ: ಸ್ಥಳದಲ್ಲೇ ನಾಲ್ವರು ಸಾವು



**ಬಾಗಲಕೋಟೆ:** ಕಬ್ಬು ಸಾಗಿಸುತ್ತಿದ್ದ ಟ್ರ್ಯಾಕ್ಟರ್‌ಗೆ ಹಿಂಬದಿಯಿಂದ ಕಾರು ಡಿಕ್ಕಿಯಾಗಿ ನಾಲ್ವರು ಯುವಕರು ಸಾ ವಾ ನ ನ್ನಿ ರು ವ ಘಟನೆ ಬಾಗಲಕೋಟೆ ಜಿಲ್ಲೆಯ ಜಮಖಂಡಿ ತಾಲೂಕಿನ ಸಿದ್ದಾಪುರ ಗ್ರಾಮದ ಬಳಿ ನಡೆದಿದೆ.

ಅಪಘಾ ತದಲ್ಲಿ ಮೃತಪಟ್ಟಿರುವವರನ್ನು ವಿಶ್ವನಾಥ ಕಂಬಾರ (17), ಗಣೇಶ ಅರಳಿಮಟ್ಟಿ (20), ಪ್ರವೀಣ್ ಶೇಡಬಾಳ (22), ಪ್ರಜ್ವಲ್ ಶೇಡಬಾಳ (17) ಎಂದು ಗುರುತಿಸಲಾಗಿದೆ. ಮೃತರೆಲ್ಲರೂ ಸಿದ್ದಾಪುರ ಗ್ರಾಮದ ನಿವಾಸಿಗಳಾಗಿದ್ದಾರೆ. ನಿನ್ನೆ ಮಧ್ಯರಾತ್ರಿ ಸುಮಾರು 1 ಗಂಟೆ ಸಮಯದಲ್ಲಿ ಈ ದುರಂತ ಸಂಭವಿಸಿದೆ. ಕಬ್ಬು ತುಂಬಿ ಸಾಗಾಣಿಕೆ ಮಾಡುತ್ತಿದ್ದ ಟ್ರ್ಯಾಕ್ಟರ್ ರಸ್ತೆ ಬದಿ ನಿಂತಿತ್ತು. ಅತಿ ವೇಗವಾಗಿ ಬಂದ ಕಾರು ಟ್ರ್ಯಾಕ್ಟರ್‌ಗೆ ಗುದ್ದಿದೆ. ಢಿಕ್ಕಿಯ ರಭಸಕ್ಕೆ ಕಾರು ಸಂಪೂರ್ಣ ನಜ್ಜುಗುಜ್ಜಾಗಿದ್ದು, ಟ್ರ್ಯಾಕ್ಟರ್ ಕೆಳಗೆ ಸಿಲುಕಿಕೊಂಡಿತ್ತು. ಡಿಕ್ಕಿ ಹೊಡೆದ ಪರಿಣಾಮ ಕಾರಿನಲ್ಲಿದ್ದ ನಾಲ್ವರೂ ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಜಮಖಂಡಿ ಗ್ರಾಮೀಣ ಠಾಣೆ ಪೊಲೀಸರು ತಕ್ಷಣ ಸ್ಥಳಕ್ಕೆ ಧಾವಿಸಿ ಪರಿಶೀಲನೆ ನಡೆಸಿ, ರಕ್ಷಣೆ ಕಾರ್ಯಾರಂಭ ಮಾಡಿದ್ದಾರೆ. ಕಾರಿನ ಒಳಗೆ ಸಿಲುಕಿದ್ದ ಮೃತದೇಹಗಳನ್ನು ಹೊರತೆಗೆದು ಆಸ್ಪತ್ರೆಗೂ ಸಾಗಿಸಲಾಯಿತು.

## ಕಾಡುಪ್ರಾಣಿಗಳ ಬೇಟೆಯಾಡುತ್ತಿದ್ದ ನಾಲ್ವರ ಬಂಧನ



**ನೆಲಮಂಗಲ:** ಕಾಡುಪ್ರಾಣಿಗಳ ಬೇಟೆಯಾಡುತ್ತಿದ್ದ ನಾಲ್ವರು ಆರೋಪಿಗಳ ಬಂಧಿಸಲಾಗಿದೆ. ಬೆಂಗಳೂರು ಸಂಚಾರಿ ಅರಣ್ಯಾಧಿಕಾರಿಗಳ ವಿಶೇಷ ಕಾರ್ಯಚರಣೆ ಮಾಡಿ ಆರೋಪಿಗಳನ್ನು ನೆಲಮಂಗಲದಲ್ಲಿ ಬಂಧಿಸಿದ್ದಾರೆ.

ಕಾಡುಪ್ರಾಣಿಗಳ ಬೇಟೆಯಾಡುತ್ತಿದ್ದ ರಘು, ಸುಹಾಸ್, ಶಿವರಾಜ್ ಹಾಗೂ ಪವನ್ ಎಂಬ ನಾಲ್ವರನ್ನು ಸಿನಿಮೀಯ ರೀತಿಯಲ್ಲಿ ಚೇಸ್ ನಡೆಸಿ ಅಧಿಕಾರಿಗಳು ಅರೆಸ್ಟ್ ,ಮಾಡಿದ್ದಾರೆ. ಅರಣ್ಯಾಧಿಕಾರಿಗಳನ್ನು ಕಂಡ ಆರೋಪಿ ತಂಡ ಕಾರಿನಲ್ಲಿ ಪರಾರಿಯಾಗಲು ಯತ್ನಿಸಿದ್ರು, ಅದ್ರೂ ಬಿಡದೆ ಸುಮಾರು 6 ಕಿಲೋಮೀಟರ್‌ಗಳ ಚೇಸಿಂಗ್ ಬಳಿಕ ಕನಕಪುರದ ಸಾತನೂರು ಸರ್ಕಲ್ ಬಳಿ ಅಧಿಕಾರಿಗಳ ಬಲೆಗೆ ಬಿದ್ದಿದ್ದಾರೆ.

ಬಂಧಿತರಿಂದ ರಿಯಲ್ ಎಸ್ಟೇಟ್ ಉದ್ಯಮಿಗಳ ಪಾರ್ಟಿಗಳಿಗೆ ಸಪ್ಲೈ ಮಾಡಲು ಕೊಂದು ಇಟ್ಟಿದ್ದ ಮುಳ್ಳುಹಂದಿ ಮಾಂಸ, ಎರಡು ಬಂದೂಕುಗಳು, ಒಂದು ಕೊಡಲಿ, ಹಾಗೂ ಮದ್ದುಗುಂಡುಗಳನ್ನು ಅಧಿಕಾರಿಗಳು ವಶಪಡಿಸಿಕೊಂಡಿದ್ದಾರೆ.

ಮಂಡ್ಯ, ಸಂಗಮ, ಮೇಕೆದಾಟು, ಮಳವಳ್ಳಿ, ಪುರಿಗಾಲ ಅರಣ್ಯ ಪ್ರದೇಶಗಳಲ್ಲಿ ಹೈ ಫ್ಲ್ಯಾಶ್ ಲೈಟ್‌ಗಳನ್ನು ಬಳಸಿ ದಿನನಿತ್ಯ ಬೇಟೆಯಾಡುತ್ತಿದ್ದ ಆರೋಪಿಗಳು ಕಳೆದ ಎರಡು ತಿಂಗಳಿಂದ ಅರಣ್ಯಾಧಿಕಾರಿಗಳಿಗೆ ಸಿಗದೆ ಕಾಟ ಕೊಡುತ್ತಿದ್ದರು. ಸತತ ನಿಗಾವಹಿಸಿದ ಅರಣ್ಯಾಧಿಕಾರಿಗಳ ತಂಡ ಅಂತಿಮವಾಗಿ ಅರೋಪಿಗಳನ್ನ ಬಂಧಿಸುವಲ್ಲಿ ಯಶಸ್ವಿಯಾದರು. ಕಾರ್ಯಾಚರಣೆಯಲ್ಲಿ ಎಸಿಎಫ್ ಸರಿತ, ಚಿದಾನಂದ ಬಡಿಗೇರ್, ಸಿದ್ದರಾಜು, ಅಶ್ವಿನ್, ಆಶಾ, ಬಾಬು ಹಾಗೂ ಚಾಲಕ ಮುನಿರಾಜು ಸೇರಿದಂತೆ ಅಧಿಕಾರಿಗಳ ಈ ಕಾರ್ಯಕ್ಕೆ ಮೇಲಾಧಿಕಾರಿಗಳಿಂದ ಮೆಚ್ಚುಗೆ ವ್ಯಕ್ತವಾಗಿದೆ.

## 13 ವರ್ಷದ ಬಾಲಕಿ ಮೇಲೆ ಸಾಮೂಹಿಕ ಅತ್ಯಾಚಾರ

**ಬೆಳಗಾವಿ:** ಜಿಲ್ಲೆಯ ಬೈಲಹೊಂಗಲ ತಾಲೂಕಿನ ಮುರಗೋಡ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ವಾಸಿಸುವ ಏಳನೇ ತರಗತಿಯ (13 ವರ್ಷದ) ಒರ್ವ ಅಪ್ರಾಪ್ತ ವಿದ್ಯಾರ್ಥಿನಿ ಮೇಲೆ ಇಬ್ಬರು ಆರೋಪಿಗಳು ಸಾಮೂಹಿಕ ಅತ್ಯಾಚಾರ ಮಾಡಿರುವ ಹೃದಯ ವಿದ್ರಾಯಕ ಘಟನೆ ನಡೆದಿದೆ.

ಬಾಲಕಿ ತನ್ನ ಮನೆಯಿಂದ ಸಮೀಪದಲ್ಲಿರುವ ಹಿಟ್ಟಿನ ಗಿರಣಿಗೆ ಧಾನ್ಯ ಬೀಸಲು ಹೋಗಿದ್ದಳು. ಆ ಸಮಯದಲ್ಲಿ, ಇಬ್ಬರು ಅಪರಿಚಿತರು ಅವಳನ್ನು ಕಬ್ಬಿನ ಗದ್ದೆಗೆ ಎಳೆದುಕೊಂಡು ಹೋಗಿ, ಬಲವಂತವಾಗಿ ಅತ್ಯಾಚಾರ ಮಾಡಿದ್ದಾರೆ. ಈ ಸಮಯದಲ್ಲಿ ಆರೋಪಿಗಳು ಬಾಲಕಿಗೆ ಯಾರಿಗಾದರೂ ಈ ವಿಷಯ ತಿಳಿಸಿದರೆ ಅವಳನ್ನು ಕೊಲ್ಲುವುದಾಗಿ ಜೀವ ಬೆದರಿಕೆ ಹಾಕಿದ್ದಾರೆಂದು ದೂರಿನಲ್ಲಿ ನಮೂದಾಗಿದೆ. ಭಯದಿಂದ ಮನೆಗೆ ಮರಳಿದ ಬಾಲಕಿ ಆರಂಭದಲ್ಲಿ ಘಟನೆಯ ಬಗ್ಗೆ ಮೌನವಾಗಿದ್ದಳು. ಆದರೆ ದೈಹಿಕ ನೋವು ತಡೆಯಲಾಗದೆ, ಕೊನೆಗೆ ಕುಟುಂಬದವರಿಗೆ ಹಲವಾರು ದಿನಗಳ ನಂತರ ಘಟನೆಯನ್ನು ತಿಳಿಸಿದಳು.

ಬಾಲಕಿಯ ಕುಟುಂಬವು ಈ ಸಂಬಂಧಿತ ಮಾಹಿತಿಯೊಂದಿಗೆ ಮುರಗೋಡ ಪೊಲೀಸ್ ಠಾಣೆಯನ್ನು ಸಂಪರ್ಕಿಸಿತು. ಬಾಲಕಿಯ ಮಾತುಗಳನ್ನು ಆಧಾರವಾ ಗಿಟ್ಟುಕೊಂಡು ಪೊಲೀಸರು ತಕ್ಷಣ ಪ್ರಕರಣವನ್ನು ದಾಖಲಿಸಿದ್ದಾರೆ. ಪೊಲೀಸರು ಭಾರತೀಯ ದಂಡ ಸಂಹಿತೆಯ (IPC) ಸೆಕ್ಷನ್ 376ಡಿ (ಗ್ಯಾಂಗ್ ರೇಪ್), ಪೋಕ್ಸೋ ಕಾಯ್ದೆಯ ಅಡಿಯಲ್ಲಿ ಸಂಬಂಧಿತ ವಿಧಿಗಳು ಮತ್ತು ಬಾಲಕಿಗೆ ಜೀವ ಬೆದರಿಕೆ ನೀಡಿದ ಆರೋಪದಲ್ಲಿ ಪ್ರಕರಣ ದಾಖಲಿಸಿದ್ದಾರೆ. ಘಟನೆಯ ಸಂಪೂರ್ಣ ಮಾಹಿತಿ ತಿಳಿಯಲು ಪೊಳಿಸರು ತನಿಖೆ ಆರಂಭಿಸಿದ್ದಾರೆ ಹಾಗೂ ಆರೋಪಿಗಳನ್ನ ಹುಡುಕುತ್ತಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಮುರಗೋಡ ಪೊಲೀಸರು ತನಿಖೆಯಲ್ಲಿ ತೀವ್ರ ಗಮನ ಹರಿಸಿದ್ದಾರೆ. ಆರೋಪಿಗಳನ್ನು ಬಂಧಿಸಲು ವಿಶೇಷ ತಂಡಗಳನ್ನು ರಚಿಸಲಾಗಿದೆ. ಘಟನೆಯಾದ ಸ್ಥಳದ ಪರಿಶೋಧನೆ ನಡೆಸಿ, ಫೋರೆನ್ಸಿಕ್ ಪುರಾವೆಗಳನ್ನು ಸಂಗ್ರಹಿಸಲಾಗಿದೆ. ಬಾಲಕಿಯ ವೈದ್ಯಕೀಯ ಪರೀಕ್ಷೆ ಮುಗಿಸಲಾಗಿದೆ. ಆರೋಪಿಗಳು ಪ್ರಸ್ತುತ ತಲೆಮರೆಸಿಕೊಂಡಿದ್ದಾರೆ, ಆದರೆ ಪೊಲೀಸರು ಅವರಿಗಾಗಿ ಶೋದಾ ಕಾರ್ಯ ನಡೆಸಿದ್ದಾರೆ. ಪ್ರಕರಣದ ಸೂಕ್ಷ್ಮತೆಯನ್ನು ಗಮನದಲ್ಲಿಟ್ಟುಕೊಂಡು, ಬಾಲಕಿ ಮತ್ತು ಅವಳ ಕುಟುಂಬಕ್ಕೆ ರಕ್ಷಣೆ ನೀಡುವುದರ ಜೊತೆಗೆ ಅಗತ್ಯವಾದ ಮಾನಸಿಕ ಆರೈಕೆ ಸಹಾಯವನ್ನೂ ನೀಡುವುದಾಗಿ ಪೊಳಿಸರು ಬರವಸೆ ನೀಡಿದ್ದಾರೆ.

ಸ್ಥಳೀಯ ನಾಗರಿಕರು ಮತ್ತು ಸಾಮಾಜಿಕ ಸಂಸ್ಥೆಗಳು ತ್ವರಿತ ನ್ಯಾಯದ ಮೇಲೆ ಒತ್ತಡ ಹೇರುತ್ತಿವೆ. ಪೊಲೀಸರು ತನಿಖೆಯನ್ನು ವೇಗಗೊಳಿಸಬೇಕು ಮತ್ತು ಅಪರಾಧಿಗಳನ್ನು ಕಟ್ಟಕಡೆಯ ಕಾನೂನು ಕ್ರಮಕ್ಕೆ ಒಳಪಡಿಸಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ. ಇಂತಹ ಘಟನೆಗಳು ನಾಗರಿಕ ಸಮಾಜಕ್ಕೆ ಕಳಂಕ. ಕಾನೂನು ತನ್ನ ಸಂಪೂರ್ಣ ಕ್ರಮ ಜಾರಿ ಮಾಡಲೇ ಬೇಕು ಎಂದು ಸ್ಥಳೀಯ ನಾಯಕ ಅಭಿಪ್ರಾಯಪಟ್ಟಿದ್ದಾರೆ. ಪೊಲೀಸರು ಸಾರ್ವಜನಿಕರಿಂದ ಯಾವುದೇ ಸುಳಿವು ದೊರೆತರೆ ತಮಗೆ ತಿಳಿಸುವಂತೆ ಮನವಿ ಮಾಡಿದ್ದಾರೆ.

## ಸಂಕ್ರಾಂತಿ ಬಳಿಕ ಸಿಎಂ ಬದಲಾವಣೆ: ಕೋಡಿ ಶ್ರೀ



ಮಕರ ಸಂಕ್ರಮಣದ ನಂತರ ರಾಜ್ಯ ರಾಜಕಾರಣದಲ್ಲಿ ಮಹತ್ತರ ಬದಲಾವಣೆಗಳಾಗಲಿವೆ ಎಂದು ಹಾರನಹಳ್ಳಿ ಕೋಡಿಮಠದ ಡಾ.ಶ್ರೀ.ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಜಿಗಳು ಹೇಳಿದರು. ಅವರು ಎಂದು ಖಾಸಗಿ ಕಾರ್ಯಕ್ರಮದ ನಿಮಿತ್ತ ಕೃಷ್ಣರಾಜಪೇಟೆ ಪಟ್ಟಣಕ್ಕೆ ಆಗಮಿಸಿದಾಗ ಪತ್ರಕರ್ತರೊಂದಿಗೆ ಮಾತನಾಡಿದರು.

ಶಿವನ ಮುಡಿಯ ಮೇಲಿರುವ ಮಲ್ಲಿಗೆಯು ಶಿವನ ಪಾದಕ್ಕೆ ಬೀಳಲೇಬೇಕು. ರಾಜ್ಯ ರಾಜಕಾರಣದ ಗೊಂದಲವು ಸಂಪೂರ್ಣವಾಗಿ ಬಗೆ ಹರಿಯಲಿದ್ದು ಸುಖಾಂತ್ಯ ವಾಗಲಿದೆ. ಮಕರ ಸಂಕ್ರಾಂತಿಯ ನಂತರ ರಾಜ್ಯ ರಾಜಕಾರಣದ ನಾಯಕತ್ವದ ಗುದ್ದಾಟವು ಬಗೆಹರಿಯಲಿದೆ ಎಂದು ಶ್ರೀಗಳು ಮಾರ್ಮಿಕವಾಗಿ ನುಡಿದರು.

ನಾನು ಶಾಸ್ತ್ರ ಹೇಳುವವನಲ್ಲ ಶಾಸ್ತ್ರಕಾರನಲ್ಲ ಮುಂದೆ ನಡೆಯುವ ವಿಚಾರಗಳನ್ನು ತಿಳಿಸುವ ಶಕ್ತಿ ಹೊಂದಿದ್ದೇನೆ ಅಷ್ಟೇ ಎಂದು ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿದ ಕೋಡಿ ಶ್ರೀಗಳು ರಾಷ್ಟ್ರ ರಾಜಕಾರಣದಲ್ಲಿಯೂ ಕೂಡ ಯುಗಾದಿಯ ನಂತರ ಸಮಸ್ಯೆಗಳು ಎದುರಾಗಲಿವೆ. ಇತ್ತೀಚಿಗೆ ನಡೆದ ಬಾಂಬ್ ಬ್ಲಾಸ್ಟ್ ನಂತಹ ಅಹಿತಕರ ಘಟನೆಗಳು ರಾಷ್ಟ್ರಮಟ್ಟದಲ್ಲಿ ನಡೆಯಲಿವೆ ಎಂದು ತಿಳಿಸಿದ ಕೋಡಿ ಶ್ರೀಗಳು ರಾಜಕಾರಣಿಗಳು ರಾಜಕಾರಣವನ್ನೇ ವೃತ್ತಿಯನ್ನಾಗಿ ಮಾಡಿಕೊಂಡಿರುವಾಗ ಮಠಾಧೀಶರು ಸಮಾಜದ ಒಳಿತಿಗಾಗಿ ರಾಜಕೀಯವಾಗಿ ಏಕೆ ಸಲಹೆ ಸೂಚನೆಗಳನ್ನು ನೀಡಬಾರದು ಎಂದು ಮಾರ್ಮಿಕವಾಗಿ ನುಡಿದ ಶ್ರೀಗಳು ಮಠಗಳು ಮೊದಲು ಜಾತಿಯತೆಯಿಂದ ದೂರವಿರಬೇಕು ಜಾತಿ ಪದ್ಧತಿಯು ನಾಗರೀಕ ಸಮಾಜಕ್ಕೆ ಅಂಟಿರುವ ಶಾಪವಾಗಿದ್ದು ಮಠಾಧೀಶರುಗಳು ಮೊದಲು ಜಾತಿಯ ಸಂಕೋಲೆಗಳಿಂದ ಬರಬಂದು ಜಾತ್ಯತೀತ ಸಮಾಜದ ನಿರ್ಮಾಣಕ್ಕಾಗಿ ಗಟ್ಟಿಯಾಗಿ ನಿಂತಾಗ ಮಾತ್ರ ನಾಗರೀಕ ಸಮಾಜದಲ್ಲಿ ಬದಲಾವಣೆಯನ್ನು ಕಾಣಲು ಸಾಧ್ಯವಿದೆ ಎಂದು ತಿಳಿಸಿದ ಶ್ರೀಗಳು ಪ್ರಸ್ತುತ ಸಂದರ್ಭದಲ್ಲಿ ರಾಜಕಾರಣ ದಿಕ್ಕುತಪ್ಪಿದೆ, ತತ್ವ ಆದರ್ಶ ಹಾಗೂ ಮೌಲ್ಯಗಳು ಮಾಯವಾಗಿವೆ. ಹಣವಿದ್ದವರು ರಿಯಲ್ ಎಸ್ಟೇಟ್ ಕುಳಗಳು ರಾಜಕಾರಣದಲ್ಲಿ ವಿಜೃಂಬಿಸುತ್ತಿದ್ದಾರೆ. ಪ್ರಜಾಪ್ರಭುತ್ವದ ಭವಿಷ್ಯದ ದೃಷ್ಟಿಯಿಂದ ಇದು ಒಳ್ಳೆಯ ಬೆಳವಣಿಗೆಯಲ್ಲ ಎಂದು ವಿಷಾದ ವ್ಯಕ್ತಪಡಿಸಿದ ಶ್ರೀಗಳು ಮಕರ ಸಂಕ್ರಾಂತಿಯ ನಂತರ ಮತ್ತೆ ನಾನು ಪತ್ರಕರ್ತರ ಮುಂದೆ ಬಂದು ಹಲವು ಹೊಸ ವಿಚಾರಗಳ ಬಗ್ಗೆ ಮಾತನಾಡುತ್ತೇನೆ. ಸದ್ಯಕ್ಕೆ ಇಷ್ಟು ಸಾಕು ಎಂದು ಪತ್ರಕರ್ತರ ಪ್ರಶ್ನೆಗಳಿಗೆ ಅಂತ್ಯ ಹಾಡಿದರು.

ಇದೇ ಸಂದರ್ಭದಲ್ಲಿ ಕೃಷ್ಣರಾಜಪೇಟೆ ತಾಲೂಕಿನ ಸಮಾಜ ಸೇವಕರು ಹಾಗೂ ರಾಜ್ಯ ಆರ್.ಟಿ.ಓ ಅಧಿಕಾರಿಗಳ ಸಂಘದ ಅಧ್ಯಕ್ಷರಾದ ಮಲ್ಲಿಕಾರ್ಜುನ ಅವರ ಚಾರಿಟಬಲ್ ಟ್ರಸ್ಟ್ ಕಚೇರಿಗೆ ಭೇಟಿ ನೀಡಿದ ಶ್ರೀಗಳು ಕೋಡಿ ಶ್ರೀಗಳು ಮಲ್ಲಿಕಾರ್ಜುನ ದಂಪತಿಗಳಿಗೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಉದ್ಯಮಿ ಬಿ.ರಾಜಶೇಖರ್ ತಾಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಪೂರ್ಣಚಂದ್ರ ತೇಜಸ್ವಿ, ಮಾಜಿ ಅಧ್ಯಕ್ಷರಾದ ಎಂ.ಕೆ.ಹರಿಚರಣತಿಲಕ್, ಕೆ.ಆರ್.ನೀಲಕಂಠ ಗೌರವಾಧ್ಯಕ್ಷ ಬಳ್ಳೇಕೆರೆ ಮಂಜುನಾಥ್, ಮುಖಂಡರಾದ ಆಲಂಬಾಡಿ ಕಾವಲುದೇವರಾಜು,ಜಯರಾಮೇಗೌಡ,ಕ್ರೈಸ್ಟ್ ದ ಕಿಂಗ್ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲ ಶಿವರಾಜ್, ಪ್ರಥಮ ದರ್ಜೆ ಗುತ್ತಿಗೆದಾರರಾದ ಮನು ಶರತ್, ಅರಳಕುಪ್ಪೆ ಸೋಮೇಗೌಡ, ಪುರಸಭೆ ಮಾಜಿ ಸದಸ್ಯ ಕೋಳಿ ನಾಗರಾಜು ಸೇರಿದಂತೆ ಸ್ತ್ರೀಶಕ್ತಿ ಸ್ವಸಹಾಯ ಸಂಘಗಳ ಪ್ರತಿನಿಧಿಗಳು ಹಾಗೂ ಪ್ರಮುಖರು ಉಪಸ್ಥಿತರಿದ್ದರು.

## ವಿಕಲಚೇತನರಿಗೆ ಉಚಿತ ಕಾನೂನು ನೆರವು: ನ್ಯಾ. ಶ್ರೀಶೈಲ್ ಭೀಮಸೇನ ಬಾಗಡಿ



ಬೆಂಗಳೂರು ಗ್ರಾಮಾಂತರ ಜಿಲ್ಲೆ, ಡಿಸೆಂಬರ್ 3(ಕರ್ನಾಟಕ ವಾರ್ತೆ):

ಕಾನೂನು ಸೇವಾ ಪ್ರಾಧಿಕಾರಕ್ಕೆ ಸಬಂಧಪಟ್ಟಂತೆ ಎಲ್ಲಾ ವಿಕಲಚೇತನರಿಗೂ ಉಚಿತ ಕಾನೂನು ನೆರವು ನೀಡಲಾಗುವುದು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮತ್ತು ಹಿರಿಯ ಸಿವಿಲ್ ನ್ಯಾಯಾಧೀಶರಾದ ಶ್ರೀಶೈಲ್ ಭೀಮಸೇನ ಬಾಗಡಿ ಅವರು ತಿಳಿಸಿದರು.

ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ,ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ವಿಕಲಚೇತನರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳು ಇವರ ವತಿಯಿಂದ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ವಿಶ್ವ ವಿಕಲಚೇತನರ ದಿನಾಚರಣೆಯನ್ನು ಉದ್ಘಾಟಿಸಿ ಮಾತನಾಡಿದರು

ರಾಷ್ಟ್ರೀಯ ಕಾನೂನು ಸೇವಾ ಅಧಿನಿಯಮ 1987 ಕಾಲಂ 12ರಡಿಯಲ್ಲಿ ಎಲ್ಲಾ ವಿಕಲಚೇತನರಿಗೂ ಉಚಿತ ಕಾನೂನು ಅರಿವು ನೆರವು ನೀಡಲಾಗುತ್ತದೆ. ದೈಹಿಕ ನ್ಯೂನತೆಯಿಂದ ಬಳಲುತ್ತಿದ್ದು ಕಛೇರಿಗೆ ಭೇಟಿ ನೀಡಲು ಸಾಧ್ಯವಾಗದಿದ್ದರೆ ಸಹಾಯವಾಣಿ 15100 ಕರೆ ಮಾಡಬಹುದು.ಸರ್ಕಾರಿ ಸೌಲಭ್ಯ ಪಡೆಯಲು ಕಚೇರಿಗೆ ಭೇಟಿ ನೀಡಲು ಸಾಧ್ಯವಾಗದಿದ್ದರೆ ಕಾನೂನು ಸೇವಾ ಸಮಿತಿಯಿಂದ ಅರೆಕಾಲಿಕ ನ್ಯಾಯಿಕ ಸ್ವಯಂ ಸೇವಕರು ಮನೆ ಬಾಗಿಲಿಗೆ ಬಂದು ನಿಮ್ಮ ಅರ್ಜಿಗಳನ್ನು ಇಲಾಖೆಗೆ ಅರ್ಜಿ ಸಲ್ಲಿಸಿ ಕಾಲಕಾಲಕ್ಕೆ ಮಾಹಿತಿ ನೀಡುತ್ತಾರೆ.

ಕೇಂದ್ರ ಸರ್ಕಾರವು 2016ರಲ್ಲಿ ವಿಕಲಚೇತನರ ಹಕ್ಕುಗಳನ್ನು ಕಾಪಾಡಲು ಕಾನೂನನ್ನು ಜಾರಿಗೆ ತಂದಿದೆ. ಜನಸಾಮಾನ್ಯರಿಗೆ ಕಾಯಿದೆಯ ಬಗ್ಗೆ ತಿಳುವಳಿಕೆಯಿಲ್ಲದ ಕಾರಣ ಸಂಪೂರ್ಣವಾಗಿ ಅನುಷ್ಠಾನಕ್ಕೆ ಬಂದಿರುವುದಿಲ್ಲ.ಈ ಕಾಯಿದೆ ಪ್ರಕಾರ ಸರ್ಕಾರಿ ನೇಮಕಾತಿಗಳಲ್ಲಿ 4% ಮೀಸಲಾತಿ ನೀಡಬೇಕು. ಶಾಲೆಗಳಲ್ಲಿ 5% ಮೀಸಲಾತಿ ವಿಕಲ ಚೇತನರ ಮಕ್ಕಳಿಗೆ ನೀಡಬೇಕು.ಯಾವುದೇ ಸರ್ಕಾರಿ, ಖಾಸಗಿ ಕಟ್ಟಡಗಳ ಕಛೇರಿಗಳಲ್ಲಿ ವಿಕಲಚೇತನರಿಗೆ ವ್ಹೀಲ್ ಚೇರ್ ನೀಡಬೇಕಾಗುತ್ತದೆ. ಕಾನೂನು ಹಾಗೂ ಅದರ ಸದುಪಯೋಗದ ಕುರಿತು ವಿಸ್ತಾರವಾಗಿ ಮಾಹಿತಿ ಹಂಚಿಕೊಂಡರು.

ಜಿಲ್ಲಾಧಿಕಾರಿ ಎ.ಬಿ ಬಸವರಾಜು ಮಾತನಾಡಿ ಈ ದಿನದ ವಿಕಲಚೇತನರ ದಿನಾಚರಣೆಯನ್ನು ವಿಶ್ವಸಂಸ್ಥೆಯು ಸಾಮಾಜಿಕ ... ಅಂಗವಿಕಲರನ್ನೊಳಗೊಂಡ ಸಮಾಜವನ್ನು ಪೋಷಿಸುವುದು ಎಂಬ ಧ್ಯೇಯವಾಕ್ಯದೊಂದಿಗೆ ಎಲ್ಲಾ ವಿಕಲಚೇನರರನ್ನು ಮುಖ್ಯವಾಹಿನಿಗೆ ತರುವ ಉದ್ದೇಶದಿಂದ ಈ ಕಾರ್ಯ ಕ್ರಮವನ್ನು ನಡೆಸಲಾಗುತ್ತದೆ. ಹಿರಿಯ ನಾಗರೀಕರಿಗೆ ಸಹಾಯವಾಣಿ ಕೇಂದ್ರವನ್ನು ಸ್ಥಾಪಿಸಲಾಗಿದೆ. ಹಿರಿಯ ನಾಗರೀಕರಿಗೆ ವಿಕಲಚೇತನರಿಗೆ ಸಿಎಸ್‌ಆರ್ ವತಿಯಿಂದ ಅನುದಾನ ನೀಡಲಾಗುತ್ತಿದೆ.ಜಿಲ್ಲಾ ವ್ಯಾಪ್ತಿಯಲ್ಲಿ ಹಿರಿಯ ನಾಗರೀಕರಿಗೆ ವಿಶೇಷ ಶಿಬಿರಗಳನ್ನು ನಡೆಸಲಾಗಿದೆ. ವಿಶೇಷ ಚೇತನರು ತಮ್ಮಲ್ಲಿರುವ ಪ್ರತಿಭೆಯನ್ನು ಸಮರ್ಪಕವಾಗಿ ಬಳಸಿಕೊಳ್ಳಿ. ಹೆಚ್ಚು ಹೆಚ್ಚು ಸರ್ಕಾರಿ ಹುದ್ದೆಗಳಲ್ಲಿ ಬರಲು ಪ್ರಯತ್ನಿಸಿ. ಸಹಾಯ ಮಾಡಲು ಜಿಲ್ಲಾಡಳಿತ ಸಿದ್ದವಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ನಾಲ್ಕು ತಾಲೂಕಿನ ವಿವಿಧೋದ್ದೇಶ ಪುನರ್ವಸತಿ ಕಾರ್ಯಕರ್ತರುಗಳಿಗೆ ಕಂಪ್ಯೂಟರ್ ನೀಡಲಾಯಿತು. ಗ್ರಾಮೀಣ ಪುನರ್ವಸತಿ ಕಾರ್ಯಕರ್ತರಿಗೆ ಮತ್ತು ವಿಕಲಚೇತನ ಕ್ಷೇತ್ರದಲ್ಲಿ ಸಾಧನೆ ಮಾಡಿದವರಿಗೆ ಸನ್ಮಾನಿಸಲಾಯಿತು ಹಾಗೂ ವಿಕಲಚೇತನ ಮಕ್ಕಳಿಗೆ ವಿವಿಧ ಕ್ರೀಡೆ ಮತ್ತು ಸಂಸ್ಕೃತಿಕ ಸ್ಪರ್ಧೆಗಳನ್ನು ಏರ್ಪಡಿಸಲಾಗಿತ್ತು ಅದರಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸೈಯಿದಾ ಆಯಿಷಾ, ಮುಖ್ಯ ಯೋಜನಾಧಿಕಾರಿ ರಾಮಕೃಷ್ಣಯ್ಯ,ಆಲೂರು ದುದ್ದನಹಳ್ಳಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಜಯಲಕ್ಷ್ಮಮ್ಮ , ಉಪಾಧ್ಯಕ್ಷರಾದ ಪಿ.ಮುನಿರಾಜು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರಾದ ಮುದ್ದಣ್ಣ. ಎಂ, ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸತೀಶ ಪಾಣಿ, ಜಿಲ್ಲಾ ನಿರೂಪಣ ಅಧಿಕಾರಿ ಅನಿತಾಲಕ್ಷ್ಮಿ, ತಾಲೂಕಿನ ಸಿಡಿಪಿಓಗಳು ಸೇರಿದಂತೆ ಜಿಲ್ಲಾ ಮತ್ತು ತಾಲೂಕು ಅಧಿಕಾರಿಗಳು ಹಾಗೂ ವಿಶೇಷಚೇತನರು ಉಪಸ್ಥಿತರಿದ್ದರು.

## ಐದು ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಿ: ಜಿಲ್ಲಾಧಿಕಾರಿ ಎ.ಬಿ.ಬಸವರಾಜು



ಡಿಸೆಂಬರ್ 21 ರಿಂದ 24 ವರೆಗೆ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ನಡೆಯಲಿದ್ದು ಪೋಷಕರು ತಮ್ಮ ಐದು ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸಿ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ಅವರು ತಿಳಿಸಿದರು.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾಧಿಕಾರಿಯವರ ನ್ಯಾಯಾಲಯ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮದ ಅನುಷ್ಠಾನದ ಕುರಿತು ಆಯೋಜಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆಯನ್ನು ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಐದು ವರ್ಷದೊಳಗಿನ 96,727 ಮಕ್ಕಳು ಇದ್ದಾರೆ. ಡಿಸೆಂಬರ್ 21 ರಿಂದ ಲಸಿಕಾ ಅಭಿಯಾನ ಪ್ರಾರಂಭವಾಗಲಿದೆ. ದಿನಾಂಕ 22 ರಿಂದ 24 ರವೆಗೆ ಮನೆ ಮನೆಗೆ ಭೇಟಿ ನೀಡಿ ಲಸಿಕೆ ಪಡೆದಿಲ್ಲದ ಮಕ್ಕಳಿಗೆ ಲಸಿಕೆ ಹಾಕಲಾಗುತ್ತದೆ.

ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಲಸಿಕಾ ಕೇಂದ್ರಗಳನ್ನು ತೆರೆಯಲಾಗುವುದು. ಮಕ್ಕಳ ಅಂಗವೈಕಲ್ಯ ತಡೆಯಲು ಪೋಷಕರು ಯಾವುದೇ ಭಯವಿಲ್ಲದೆಯೇ ಮಕ್ಕಳಿಗೆ ಪೋಲಿಯೋ ಲಸಿಕೆ ಹಾಕಿಸಬೇಕು. ಲಸಿಕೆಯನ್ನು ಪಡೆಯದ ಮಕ್ಕಳಿಗೆ ಮನೆಮನೆಗೆ ತೆರಳಿ ಲಸಿಕೆ ನೀಡುವಂತೆ, ವಲಸೆ ಕಾರ್ಮಿಕರ ಮಕ್ಕಳನ್ನು ಗುರುತಿಸಿ ಅವರಿಗೆ ಕೂಡ ಲಸಿಕೆ ಹಾಕಿಸಬೇಕು. ಜಿಲ್ಲೆಯಲ್ಲಿ ಶೇಕಡ 100% ರಷ್ಟು ಪ್ರಗತಿ ಸಾಧಿಸಿ ಎಂದು ಆರೋಗ್ಯಾಧಿಕಾರಿಗಳಿಗೆ ತಿಳಿಸಿದರು.

ಸಾರ್ವಜನಿಕರು ಹೆಚ್ಚು ಸೇರುವ ಬಸ್ ನಿಲ್ದಾಣ, ಮಾರುಕಟ್ಟೆ, ರೈಲು ನಿಲ್ದಾಣ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಪೋಲಿಯೋ ಲಸಿಕಾ ಕೇಂದ್ರಗಳನ್ನು ತೆರೆಯಲಾಗುವುದು ಹಾಗೂ ಟೋಲ್ ಗೇಟ್‌ಗಳಲ್ಲಿ ಮತ್ತು ರಾಷ್ಟ್ರೀಯ ಹೆದ್ದಾರಿಗಳಲ್ಲಿ ಲಸಿಕಾ ಕೇಂದ್ರಗಳನ್ನು ತೆರೆಯಲು ಸೂಚಿಸಿದರು.

ಮುಂಚಿತವಾಗಿ ಬೂತ್‌ಗಳ ನಿಯೋಜನೆ ಸಿಬ್ಬಂದಿ ನಿಯೋಜನೆ ಸೇರಿದಂತೆ ಅಗತ್ಯ ಪೂರ್ವ ಸಿದ್ಧತೆ ಮಾಡಿಕೊಳ್ಳಬೇಕು. ಪೋಲಿಯೋ ಲಸಿಕೆ ಹಾಕಿಸುವಂತೆ ವ್ಯಾಪಕ ಪ್ರಚಾರ ಮಾಡಿ ಎಲ್ಲಾ ಗ್ರಾಮಗಳಿಗೂ ತಲುಪುವಂತೆ ಸ್ವಚ್ಛತಾ ವಾಹಿನಿ ಮತ್ತು ಆಟೋಗಳ ಮೂಲಕ ಪ್ರಚಾರ ಮಾಡಿ ಲಸಿಕೆ ಅಭಿಯಾದ ಕುರಿತು ಮಾಹಿತಿ ನೀಡಿ ಜಿಲ್ಲೆಯ ಯಾವೊಂದು ಮಗುವೂ ಲಸಿಕೆಯಿಂದ ವಂಚಿತರಾಗದಂತೆ ನೋಡಿಕೊಳ್ಳಿ ಎಂದು ಅಧಿಕಾರಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳಾದ ಡಾ.ಲಕ್ಕ ಕೃಷ್ಣರೆಡ್ಡಿ, ಜಿಲ್ಲಾ ಸರ್ವೇಕ್ಷಣಾ ವೈದ್ಯಾಧಿಕಾರಿಗಳಾದ ಡಾ.ನಾಗರಾಜ್ ಎನ್. ಟಿ, ಜಿಲ್ಲಾ ಆರ್.ಸಿ.ಹೆಚ್. ಅಧಿಕಾರಿಗಳಾದ ಡಾ. ಸೀಮಾ ರುದ್ರಪ್ಪ ಮಾಬಳೆ ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

## ತಳ್ಳುಗಾಡಿಯಲ್ಲಿ ಸಂಪೂರ್ಣ ಎಟಿಎಂ ಮಷೀನ್ ಹೊತ್ತೊಯ್ದ ಖದೀಮರು..!



**ಬೆಳಗಾವಿ**: ರಾಜ್ಯದಾದ್ಯಂತ ಎಟಿಎಂ ಕಳ್ಳತನಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ, ಬೆಳಗಾವಿ ಜಿಲ್ಲೆಯ ಹೊಸ ವಂಟಮೂರಿ ಗ್ರಾಮದಲ್ಲಿ ನಡೆದ ವಿಚಿತ್ರ ಕಳ್ಳತನದ ಘಟನೆ ಪೊಲೀಸರನ್ನೇ ಅಚ್ಚರಿಗೊಳಿಸಿದೆ. ಕಳ್ಳರು ಸಂಪೂರ್ಣ ಎಟಿಎಂ ಮಷೀನ್‌ನ್ನೇ ಅದರ ಸ್ಥಳದಿಂದ ಕಿತ್ತು, ತಳ್ಳುಗಾಡಿಯ ಮೂಲಕ ಸುಮಾರು 200 ಮೀಟರ್‌ಗಳ ದೂರ ಹೊತ್ತೊಯ್ದು ಪರಾರಿಯಾಗಿದ್ದಾರೆ.

ಈ ಆಘಾತಕಾರಿ ಘಟನೆ ರಾಷ್ಟ್ರೀಯ ಹೆದ್ದಾರಿ 48ರ ಪಕ್ಕದಲ್ಲಿರುವ ಹೊಸ ವಂಟಮೂರಿ ಗ್ರಾಮದ ಇಂಡಿಕ್ಯಾಶ್ ಎಟಿಎಂ ಕೇಂದ್ರದಲ್ಲಿ ನಡೆದಿದೆ. ಮೂವರು ಖದೀಮರು ಈ ಸಂಬಂಧ ಪ್ಲಾನ ಮಾಡಿ ಈ ಕೃತ್ಯ ಮಾಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಕಳ್ಳರು ಮೊದಲು ಎಟಿಎಂ ಕೊಠಡಿಯೊಳಗೆ ಪ್ರವೇಶಿಸಿ, ಶಬ್ದವಾದರೆ ಅಲಾರಂ ಸದ್ದು ಮಾಡದಂತೆ ಮಷೀನ್‌ನಲ್ಲಿನ ಸೆನ್ಸಾರ್‌ಗಳು ಮತ್ತು ಸಿಸಿಟಿವಿ ಕ್ಯಾಮೆರಾಗಳ ಮೇಲೆ 'ಬ್ಲಾಕ್ ಸ್ಪ್ರೇ' ಬಳಸಿ ಅವನ್ನು ನಿಷ್ಕ್ರಿಯಗೊಳಿಸಿದರು. ಇದರಿಂದ ಅವರ ಚಲನವಲನ ಸ್ಪಷ್ಟವಾಗಿ ದಾಖಲಾಗಿಲ್ಲ ಜೊತೆಗೆ ಅಲಾರಂ ಕೂಡ ಸದ್ದು ಮಾಡಿಲ್ಲ. ನಂತರ, ಕಳ್ಳರು ಎಟಿಎಂ ಮಷೀನ್‌ನ್ನನ್ನು ಅದರ ಬುಡದಿಂದ ಕಿತ್ತು ತೆಗೆದರು. ಮಷೀನ್‌ನ್ನು ಕತ್ತರಿಸಿ ಹಣವನ್ನು ಮಾತ್ರ ತೆಗೆಯದೆ, ಸಂಪೂರ್ಣ ಎಟಿಎಂ ಮಷೀನ್‌ನನ್ನೇ ಧ್ವಂಸಗೊಳಿಸಿದ್ದಾರೆ. ಈ ಘಟನೆ ಸ್ಥಳೀಯ ಪೊಲೀಸರೇ ಬೆಚ್ಚಿಬಿದ್ದಿದ್ದಾರೆ.

ಕಳ್ಳರು ತಾವೇ ತಂದಿದ್ದ ಒಂದು ತಳ್ಳುಗಾಡಿ (ಟ್ರಾಲಿ)ಗೆ ಭಾರೀ ಎಟಿಎಂ ಮಷೀನ್‌ನ್ನನ್ನು ಇರಿಸಿ, ನಂತರ, ಸಾಮಾನ್ಯ ಕಾರ್ಮಿಕರಂತೆ ನಟಿಸಿ, ಸುಮಾರು 200 ಮೀಟರ್ ದೂರವನ್ನು ಆ ತಳ್ಳುಗಾಡಿಯನ್ನು ತಳ್ಳಿಕೊಂಡು ಹೋಗಿದ್ದಾರೆ. ಹೀಗಾಗಿ ಜನರು ಹೆಚ್ಚು ಇವರ ಬಗ್ಗೆ ಗಮನಿಸಿಲ್ಲ.

ಸುಮಾರು 200 ಮೀಟರ್ ಹೋದ ಬಳಿಕ, ಅವರು ಪೂರ್ವಯೋಜನೆಯಂತೆ ನಿಲ್ಲಿಸಿದ್ದ ತಮ್ಮ ವಾಹನದಲ್ಲಿ ಮಷೀನ್‌ನ್ನನ್ನು ಶಿಫ್ಟ್ ಮಾಡಿಕೊಂಡು, ತಳ್ಳುಗಾಡಿಯನ್ನು ಸ್ಥಳದಲ್ಲಿಯೇ ಬಿಟ್ಟು ಪರಾರಿಯಾಗಿದ್ದಾರೆ. ಈ ಇಡೀ ಘಟನೆಯೂ ಅವರು ಓಡಾಡಿದ ಕೆಲವು ಸ್ಥಳಗಳ ಸಿಸಿಟಿವಿ ದೃಶ್ಯದಲ್ಲೆ ಸೆರೆಯಾಗಿವೆ.

ಕಳ್ಳತನವಾದ ಎಟಿಎಂನಲ್ಲಿ ಒಂದು ಲಕ್ಷ ರೂಪಾಯಿಗಳಿಗೂ ಅಧಿಕ ಹಣವಿತ್ತೆಂದು ಅಂದಾಜು ಮಾಡಲಾಗಿದೆ. ಘಟನೆ ಬೆಳಕಿಗೆ ಬಂದ ನಂತರ ಸ್ಥಳೀಯರು ಕಾಕತಿ ಪೊಲೀಸ್ ಠಾಣೆಗೆ ಮಾಹಿತಿ ನೀಡಿದ್ದಾರೆ. ಪೊಲೀಸರು ತಕ್ಷಣ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಈ ಕಳ್ಳತನದ ಹೊಸ ತಂತ್ರವನ್ನು ಕಂಡು ಪೊಲೀಸರೇ ದಂಗಾಗಿದ್ದಾರೆ. ತನಿಖೆಯ ಭಾಗವಾಗಿ ಸಿಸಿಟಿವಿ ದೃಶ್ಯಾವಳಿಗಳನ್ನು ಪರಿಶೀಲಿಸಲಾಗುತ್ತಿದೆ ಮತ್ತು ಆರೋಪಿಗಳನ್ನು ಪತ್ತೆಹಚ್ಚಲು ವಿಶೇಷ ತಂಡಗಳನ್ನು ರಚಿಸಲಾಗಿದೆ. ಕಾಕತಿ ಪೊಲೀಸ್ ಠಾಣೆಯಲ್ಲಿ ಈ ಪ್ರಕರಣವನ್ನು ದಾಖಲಾಗಿದೆ.

## ಕೆಂಪೇಗೌಡ ವಿಮಾನ ನಿಲ್ದಾಣ ಸೇರಿದಂತೆ ಪ್ರಮುಖ ಮಾಲ್‌ಗಳಿಗೆ ಹುಸಿ ಬಾಂಬ್ ಬೆದರಿಕೆ..!



**ಬೆಂಗಳೂರು**: ನಗರದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ (KIA) ಮತ್ತು ಹಲವಾರು ಪ್ರಮುಖ ಶಾಪಿಂಗ್ ಮಾಲ್‌ಗಳ ಮೇಲೆ ಬಾಂಬ್ ಸ್ಫೋಟಿಸುವುದಾಗಿ ಬೆದರಿಕೆ ಹಾಕುವ ಸೈಬರ್ ಸಂದೇಶ ನಗರ ಪೊಲೀಸ್ ಆಯುಕ್ತರ ಇ-ಮೇಲ್‌ಗೆ ಬಂದಿದೆ. 'ಜೈಷ್-ಇ-ಮೊಹಮ್ಮದ್' ಭಯೋತ್ಪಾದಕ ಸಂಘಟನೆಯ ಹೆಸರನ್ನು ದುರುಪಯೋಗ ಪಡಿಸಿಕೊಂಡು ರವಾನಿಸಲಾದ ಈ ಹುಸಿ ಬೆದರಿಕೆಯಿಂದ ಆತಂಕ ಸೃಷ್ಟಿಸಲು ಪ್ರಯತ್ನಿಸಲಾಗಿದೆ.

ಈ ಬೆದರಿಕೆ ಬೆಂಗಳೂರು ನಗರ ಪೊಲೀಸ್ ಆಯುಕ್ತರ (ಕಂಪೊಲ್) ಅಧಿಕೃತ ಇ-ಮೇಲ್ ವಿಳಾಸಕ್ಕೆ ಕಳುಹಿಸಲಾಗಿದೆ. 'ಮೋಹಿತ್ ಕುಮಾರ್' ಎಂಬ ಹೆಸರಿನ ಇ-ಮೇಲ್ ಐಡಿಯಿಂದ ಬಂದ ಈ ಸಂದೇಶ, ತನ್ನನ್ನು 'ಜೈಷ್-ಇ-ಮೊಹಮ್ಮದ್ ವೈಟ್ ಕಾಲರ್ ಟೆರರ್ ಟೀಮ್' ಎಂದು ಪರಿಚಯಿಸಿಕೊಂಡಿದೆ.ಬೆದರಿಕೆ ಸಂದೇಶದ ವಿವರ ಇಂಗ್ಲಿಷ್‌ನಲ್ಲಿ ಬರೆಯಲಾದ ಈ ಬೆದರಿಕೆಯಲ್ಲಿ, ಆಯ್ದ ಪ್ರಮುಖ ಸ್ಥಲಗಳಾದ ಕೆಂಪೇಗೌಡ ವಿಮಾನ ನಿಲ್ದಾಣ, ಒರಿಯನ್ ಮಾಲ್, ಲುಲು ಮಾಲ್, ಫೋರಂ ಸೌತ್ ಮಾಲ್ ಮತ್ತು ಮಂತ್ರಿ ಸ್ಕ್ವೇರ್ ಮಾಲ್ ಗಳನ್ನು ಗುರಿಯಾಗಿಸಿ, ಸಂಜೆ 7 ಗಂಟೆಯ ನಂತರ ಬಾಂಬ್ ಸ್ಫೋಟಗೊಳ್ಳಲಿದೆ ಎಂದು ಬೆದರಿಕೆ ಹಾಕಲಾಗಿದ್ದು, ಕೊನೆಯಲ್ಲಿ ನಮ್ಮ ಅಲ್ಲಾ ಮತ್ತು ನಮ್ಮ ಮಾಸ್ಟರ್ ಮೋಹಿತ್ ಅವರಿಗೆ ಧನ್ಯವಾದಗಳು ಎಂದು ವಿಚಿತ್ರವಾಗಿ ಬೆದರಿಕೆ ಸಂದೇಶ ಕಳುಹಿಸಿದ್ದಾರೆ.

ಸಂದೇಶದಲ್ಲಿ ಹಣ ಬೇಡುವ ಪ್ರಯತ್ನವೂ ಮಾಡಲಾಗಿದ್ದು, ಇದು ಸಂಭವಿಸದಿರಲು 91936 8077 ಸಂಖ್ಯೆಗೆ ಕರೆ ಮಾಡಿ, ಹಣವನ್ನು ಪಾವತಿ ಮಾಡಿ ಎಂದು ಸೂಚಿಸಲಾಗಿತ್ತು ಎಂದು ಪೊಲೀಸರು ತಿಳಿಸಿದ್ದಾರೆ. ಜೊತೆಗೆ ಈ ಬದರಿಕೆ ಕೇವಲ ಹಣಕ್ಕಾಗಿ ಮಾಡಿದ್ದಾರೆ ಎಂದೂ ಹೇಳಿದ್ದಾರೆ.

ಈ ಬೆದರಿಕೆ ಸಂದೇಶ ಬಂದ ತಕ್ಷಣವೇ ಪೊಲೀಸರು ತೀವ್ರ ಕಾರ್ಯಚರಣೆ ನಡೆಸಿದ್ದಾರೆ. ವಿಮಾನ ನಿಲ್ದಾಣ ಮತ್ತು ಹೆಸರಿಸಲಾದ ಎಲ್ಲಾ ಶಾಪಿಂಗ್ ಮಾಲ್‌ಗಳ ಸುತ್ತಮುತ್ತ ತೀವ್ರ ನಿಗಾ ವಹಿಸಿ, ಭದ್ರತೆ ನೀಡಲಾಗಿದೆ. ಬಾಂಬ್ ಪತ್ತೆ ಹಚ್ಚುವ ನಿಷ್ಕ್ರಿಯ ದಳ (BDS) ಮತ್ತು ಶ್ವಾನದಳಗಳು (ಡಾಗ್ ಸ್ಕ್ವಾಡ್) ಪ್ರತಿಯೊಂದು ಸ್ಥಳವನ್ನೂ ಕೂಲಂಕಷವಾಗಿ ಪರಿಶೀಲನೆ ನಡೆಸಿದ್ದಾರೆ. ಯಾವುದೇ ಸ್ಫೋಟಕ ವಸ್ತುಗಳು ಪತ್ತೆಯಾಗದ ಕಾರಣ, ಈ ಬೆದರಿಕೆಯನ್ನು 'ಹುಸಿ' ಎಂದು ಪೊಲೀಸರು ದೃಢಪಡಿಸಿದ್ದಾರೆ. ಸಾರ್ವಜನಿಕರ ಭದ್ರತೆಗೆ ಧಕ್ಕೆ ತರುವ ಈ ಘಟನೆ ಸಂಬಂಧಿ ಬೆಂಗಳೂರಿನ ಸೆಂಟ್ರಲ್ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಬೆದರಿಕೆ ಸಂದೇಶ ಕಳುಹಿಸಲು ಬಳಸಲಾದ ಇ-ಮೇಲ್ ಐಡಿಯಲ್ಲಿನ 'ಮೋಹಿತ್ ಕುಮಾರ್' ಎಂಬ ಹೆಸರಿನ ವ್ಯಕ್ತಿಯೇ ನಿಜವಾದ ಆರೋಪಿಯೋ ಅಥವಾ ಅವನ ಐಡಿಯನ್ನು ಮತ್ತೊಬ್ಬರು ದುರುಪಯೋಗ ಪಡಿಸಿಕೊಂಡರೋ ಎಂಬುದನ್ನು ಪತ್ತೆಹಚ್ಚಲು ತೀವ್ರ ತನಿಖೆ ನಡೆಸಲಾಗುತ್ತಿದೆ. ಆರೋಪಿ ಭಯೋತ್ಪಾದಕ ಸಂಘಟನೆಯ ಹೆಸರನ್ನು ಗಲಬೆ ಸೃಷ್ಟಿಸಲು ಬಳಸಿಕೊಂಡಿದ್ದಾನೆ ಎಂದು ತಿಳಿದುಬಂದಿದೆ.

ಸೈಬರ್ ತಂತ್ರಜ್ಞಾನದ ನೆರವಿನೊಂದಿಗೆ ಇ-ಮೇಲ್ ಮೂಲ, ಐಪಿ ವಿಳಾಸ ಮತ್ತು ಸಂಬಂಧಿತ ಫೋನ್ ಸಂಖ್ಯೆಯನ್ನು ಟ್ರ್ಯಾಕ್ ಮಾಡುವ ಪ್ರಯತ್ನ ನಡೆಸಲಾಗುತ್ತಿದೆ. ಸಾರ್ವಜನಿಕರಿಗೆ ಸ್ಥಳಗಳಲ್ಲಿ ಸಾಮಾನ್ಯ ಭದ್ರತೆ ಹೆಚ್ಚಿಸಲಾಗಿದ್ದು, ಯಾವುದೇ ಅನಾಹುತ ಸಂಭವಿಸದಂತೆ ಭದ್ರತೆ ನೀಡಲಾಗಿದೆ.

## LKG-UKG ಮಕ್ಕಳಿಗೂ ಬಿಸಿಯೂಟ: ಯೋಜನೆ ಅನುಷ್ಠಾನಕ್ಕೆ ಸರ್ಕಾರ ಆದೇಶ



**ಬೆಂಗಳೂರು**: ಕರ್ನಾಟಕ ಸರ್ಕಾರವು ಸರ್ಕಾರಿ ಶಾಲೆಗಳ ಪೂರ್ವ ಪ್ರಾಥಮಿಕ ತರಗತಿಗಳಾದ ಎಲ್‌ಕೆಜಿ ಮತ್ತು ಯುಕೆಜಿ (LKG-UKG) ಮಕ್ಕಳಿಗೂ ಪ್ರಧಾನ ಮಂತ್ರಿ ಪೋಷಣ ಶಕ್ತಿ ನಿರ್ಮಾಣ ಯೋಜನೆಯಡಿ ಬಿಸಿಯೂಟ (ಮಧ್ಯಾಹ್ನದ ಊಟ) ಒದಗಿಸುವ ಮಹತ್ವದ ನಿರ್ಧಾರ ಕೈಗೊಂಡಿದೆ. ಡಿಸೆಂಬರ್ 1, 2025 ರಿಂದಲೇ ಈ ಯೋಜನೆ ಜಾರಿಗೆ ಬರುತ್ತಿದ್ದು, ಈ ಚಿಕ್ಕ ಮಕ್ಕಳಿಗೆ ಪೌಷ್ಟಿಕಾಂಶಯುಕ್ತ ಬಿಸಿಯೂಟದ ಜೊತೆಗೆ ಕ್ಷೀರಭಾಗ್ಯ ಯೋಜನೆಯಡಿ ಹಾಲು, ವಾರಕ್ಕೆ ಎರಡು ಬಾರಿ ಮೊಟ್ಟೆ ಹಾಗೂ ಬಾಳೆಹಣ್ಣು ಕೂಡಾ ನೀಡಲಾಗುವುದು.

ಈ ಕುರಿತು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ಎಲ್ಲಾ ಜಿಲ್ಲಾ ಶಿಕ್ಷಣಾಧಿಕಾರಿಗಳಿಗೆ ಆದೇಶ ಹೊರಡಿಸಿದ್ದು, ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ಬಾಲವಾಟಿಕಾ (ಪೂರ್ವ ಪ್ರಾಥಮಿಕ) ತರಗತಿಗಳಿರುವ ಎಲ್ಲಾ ಶಾಲೆಗಳೂ ಈ ಯೋಜನೆಯಡಿ ಬರುತ್ತವೆ.

ಪ್ರಸ್ತುತ ರಾಜ್ಯದಲ್ಲಿ ಸುಮಾರು 1,98,270 ಮಕ್ಕಳು LKG ಮತ್ತು UKG ತರಗತಿಗಳಲ್ಲಿ ಓದುತ್ತಿದ್ದಾರೆ. ಇವರೆಲ್ಲರಿಗೂ ಮಧ್ಯಾಹ್ನದ ಬಿಸಿಯೂಟ ಒದಗಿಸಲು ಕೇಂದ್ರ ಸರ್ಕಾರವು 2024-25ನೇ ಸಾಲಿನ ವಾರ್ಷಿಕ ಕಾರ್ಯಯೋಜನೆಯಲ್ಲಿ ₹2,215 ಲಕ್ಷ ಅನುದಾನವನ್ನು ಮಂಜೂರು ಮಾಡಿದೆ. ಈ ಯೋಜನೆಯ ಮೂಲಕ 3 ರಿಂದ 6 ವರ್ಷ ವಯೋಮಾನದ ಮಕ್ಕಳ ಪೌಷ್ಟಿಕಾಂಶ ಮತ್ತು ಆರೋಗ್ಯ ಸುಧಾರಣೆಗೆ ಒತ್ತು ನೀಡಲಾಗುತ್ತಿದೆ. ಈಗಾಗಲೇ 1 ರಿಂದ 8ನೇ ತರಗತಿಯವರೆಗೆ ಬಿಸಿಯೂಟ ಜಾರಿಯಲ್ಲಿರುವಾಗ, ಈಗ ಚಿಕ್ಕ ವಯಸ್ಸಿನ ಮಕ್ಕಳನ್ನೂ ಸೇರಿಸಿಕೊಂಡು ಯೋಜನೆಯನ್ನು ಸಂಪೂರ್ಣಗೊಳಿಸಲಾಗುತ್ತಿದೆ. ಇದರಿಂದ ಶಾಲಾ ಪ್ರವೇಶದ ಮೊದಲ ಹಂತದಲ್ಲೇ ಮಕ್ಕಳಲ್ಲಿ ಕೂಡು ಆಹಾರ ಕ್ರಮ ಬೆಳೆಯಲಿದೆ ಎಂದು ಇಲಾಖೆ ಅಧಿಕಾರಿಗಳು ಅಭಿಪ್ರಾಯಪಟ್ಟಿದ್ದಾರೆ.

ಬಿಸಿಯೂಟ ತಯಾರಿಕೆಗೆ ಅಡುಗೆ ಸಿಬ್ಬಂದಿಯನ್ನು ನೇಮಿಸಿಕೊಳ್ಳಲು ಶಾಲೆಗಳಿಗೆ ಅನುಮತಿ ನೀಡಲಾಗಿದೆ. ಅಡುಗೆ ಸಹಾಯಕರು ಮತ್ತು ಅಡುಗೆಯವರಿಗೆ ಗೌರವ ಧನವನ್ನು ಶಾಲಾ ಆಡಳಿತ ಸಮಿತಿ (SDMC) ಅಥವಾ ಶಾಲಾ ಅಭಿವೃದ್ಧಿ ಮತ್ತು ಮೇಲ್ವಿಚಾರಣಾ ಸಮಿತಿಯ ಮೂಲಕ ನೀಡಬೇಕೆಂದು ಆದೇಶದಲ್ಲಿ ಸ್ಪಷ್ಟವಾಗಿ ಉಲ್ಲೇಖಿಸಲಾಗಿದೆ. ಈ ಹಿಂದೆ ಕೆಲವು ಶಾಲೆಗಳಲ್ಲಿ ಸಿಬ್ಬಂದಿ ಕೊರತೆಯಿಂದ ಬಿಸಿಯೂಟ ತಯಾರಿಕೆಯಲ್ಲಿ ತೊಂದರೆಯಾಗುತ್ತಿತ್ತು.

ಹೊಸ ರಾಷ್ಟ್ರೀಯ ಶಿಕ್ಷಣ ನೀತಿ (NEP-2020) ಯಲ್ಲಿ ಪೂರ್ವ ಪ್ರಾಥಮಿಕ ಶಿಕ್ಷಣಕ್ಕೆ ವಿಶೇಷ ಪ್ರಾಶಸ್ತ್ಯ ನೀಡಲಾಗಿದೆ. ಈ ಯೋಜನೆಯೂ ಆ ದಿಶೆಯಲ್ಲಿ ಮತ್ತೊಂದು ಮಹತ್ವದ ಹೆಜ್ಜೆ ಎಂದು ಶಿಕ್ಷಣ ತಜ್ಞರು ತಿಳಿಸಿದ್ದಾರೆ. ಚಿಕ್ಕ ವಯಸ್ಸಿನಲ್ಲೇ ಪೌಷ್ಟಿಕ ಆಹಾರ ಸಿಗುವುದರಿಂದ ಮಕ್ಕಳ ದೈಹಿಕ-ಮಾನಸಿಕ ಬೆಳವಣಿಗೆಗೆ ದೊಡ್ಡದ ಪ್ರಯೋಜನವಾಗಲಿದೆ ಎಂದು ಅವರು ಹೇಳಿದ್ದಾರೆ.

## ಸಿಎಂ ಸಿದ್ದು-ವೇಣುಗೋಪಾಲ್ ಹೈವೋಲ್ಟೇಜ್ ಮೀಟಿಂಗ್: ನಾಯಕತ್ವ ಬದಲಾವಣೆ ಬಗ್ಗೆ ಮಹತ್ವದ ಚರ್ಚೆ



**ಮಂಗಳೂರು**: ಕರ್ನಾಟಕ ರಾಜಕಾರಣದಲ್ಲಿ ಮತ್ತೊಮ್ಮೆ ಮುಖ್ಯಮಂತ್ರಿ ಕುರ್ಚಿ ಗುದ್ದಾಟ ಮುಂದುವರೆದಿದೆ. ಕಾಂಗ್ರೆಸ್ ಹೈಕಮಾಂಡ್‌ನಿಂದ ಯಾವ ಕ್ಷಣದಲ್ಲಿ, ಯಾವ ಸಂದೇಶ ಬರುತ್ತದೆ ಎಂಬ ಆತಂಕದ ನಡುವೆಯೇ ಸಿಎಂ ಸಿದ್ದರಾಮಯ್ಯ ಅವರು ಮಂಗಳೂರಿನಲ್ಲಿ ಪಕ್ಷದ ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ಪ್ರಧಾನ ಕಾರ್ಯದರ್ಶಿ ಕೆ.ಸಿ. ವೇಣುಗೋಪಾಲ್ ಅವರನ್ನು ಭೇಟಿಯಾಗಿದ್ದಾರೆ.

ಮಂಗಳೂರು ವಿಶ್ವವಿದ್ಯಾಲಯದ ಗೆಸ್ಟ್ ಹೌಸ್ 'ಕಾವೇರಿ'ಯಲ್ಲಿ ಮಂಗಳವಾರ ನಡೆದ ಮೀಟಿಂಗ್ ಇಡೀ ರಾಜ್ಯ ರಾಜಕಾರಣವನ್ನೇ ಬಿಸಿ ಮಾಡಿದೆ. ಸುಮಾರು ಅರ್ಧ ಗಂಟೆ ಕಾಲ ನಡೆದ ಈ ಏಕಾಂತ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಕೆ.ಸಿ. ವೇಣುಗೋಪಾಲ್ ಮಾತ್ರ ಇದ್ದರು. ಸಭೆಯಲ್ಲಿ ಸಿದ್ದರಾಮಯ್ಯ ಅವರು ಮಾತನಾಡಿದ್ದು, "ನಾನು ಡಿ.ಕೆ. ಶಿವಕುಮಾರ್ ಅವರೊಂದಿಗೆ ಈಗಾಗಲೇ ಮಾತಾಡಿದ್ದೇನೆ. ರಾಜ್ಯದ ಬೆಳವಣಿಗೆಗಳ ಬಗ್ಗೆ ಹೈಕಮಾಂಡ್‌ಗೆ ಪೂರ್ತಿ ಮಾಹಿತಿ ನೀಡಿದ್ದೇನೆ." "ಹೈಕಮಾಂಡ್ ಯಾವ ನಿರ್ಧಾರ ತೆಗೆದುಕೊಂಡರೂ ನನಗೆ ಒಪ್ಪಿಗೆ. ಆದರೆ ಮುಂದೆ 2028ರ ವಿಧಾನಸಭೆ ಚುನಾವಣೆ ಇದೆ. ಆತುರದ ನಿರ್ಧಾರದಿಂದ ಪಕ್ಷಕ್ಕೆ ಧಕ್ಕೆ ಬರಬಾರದು." "ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸುತ್ತಿದ್ದೇವೆ. ಈ ಸಾಧನೆಯ ಮೇಲೆಯೇ ಮುಂದಿನ ಚುನಾವಣೆ ಎದುರಿಸಬೇಕು. ಈ ಹೊತ್ತಲ್ಲಿ ನಾಯಕತ್ವ ಬದಲಾವಣೆ ಪಕ್ಷಕ್ಕೆ ಹಿನ್ನಡೆ ತರಬಹುದು" ಎಂದು ಹೇಳಿದ್ದಾರೆ.

ಇನ್ನು ಈ ವಿಷಯಕ್ಕೆ ಸಂಬಂಧಿಸಿದಂತೆ ಕೆ.ಸಿ. ವೇಣುಗೋಪಾಲ್ ಅವರು ಸ್ಪಷ್ಟ ಸಂದೇಶ ನೀಡಿದ್ದಾರೆ. "ವರಿಷ್ಠ ನಾಯಕರು ರಾಜ್ಯದ ಎಲ್ಲಾ ಬೆಳವಣಿಗೆಗಳನ್ನು ಗಮನಿಸುತ್ತಿದ್ದಾರೆ." "ಸಿದ್ದರಾಮಯ್ಯ ಮತ್ತು ಡಿ.ಕೆ. ಶಿವಕುಮಾರ್ ಒಗ್ಗಟ್ಟಾಗಿ ಕೆಲಸ ಮಾಡಬೇಕು. ನಿಮ್ಮ ಹಿಂದಿನ ಶಾಸಕರು ಕೂಡ ಒಗ್ಗಟ್ಟಾಗಿರಬೇಕು." "ನಿಮ್ಮ ನಡುವೆ ಭಿನ್ನಾಭಿಪ್ರಾಯ ತೋರಿದರೆ ಅದನ್ನೇ ಬಿಜೆಪಿ-ಜೆಡಿಎಸ್ ಅಸ್ತ್ರವನ್ನಾಗಿ ಬಳಸಿಕೊಳ್ಳುತ್ತವೆ. ಅಂತಹ ಅವಕಾಶ ನೀಡಬೇಡಿ." "ನಾಯಕತ್ವ ಬದಲಾವಣೆಯಾಗಬೇಕೇ, ಸಿದ್ದರಾಮಯ್ಯ ಮುಂದುವರಿಯಬೇಕೇ, ಅಂತಿಮ ನಿರ್ಧಾರ ಹೈಕಮಾಂಡ್ ತೆಗೆದುಕೊಳ್ಳುತ್ತದೆ." "ಈಗಿನ ಗಮನ ಸಂಪೂರ್ಣವಾಗಿ ಗ್ಯಾರಂಟಿ ಯೋಜನೆಗಳ ಯಶಸ್ವಿ ಅನುಷ್ಠಾನದ ಮೇಲಿರಲಿ. ಮುಂದಿನ ಚುನಾವಣೆ ಗ್ಯಾರಂಟಿಗಳ ಮೇಲೇ ನಿಂತಿದೆ ಎಂದು ತಿಳಿಸಿದರು.

ಕಳೆದ ಕೆಲವು ತಿಂಗಳುಗಳಿಂದ ಡಿ.ಕೆ. ಶಿವಕುಮಾರ್ ಪಡೆಯು ಒತ್ತಡ ಹೆಚ್ಚಾಗಿದೆ. 2023ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದಾಗಲೇ "ಎರಡೂವರೆ ವರ್ಷ ಸಿದ್ದರಾಮಯ್ಯ ಅಧಿಕಾರ, ಎರಡೂವರೆ ವರ್ಷ ಡಿಕೆ ಶಿವಕುಮಾರ್ ಅಧಿಕಾರ" ಫಾರ್ಮುಲಾ ಇದೆ ಎಂಬ ಮಾತುಗಳು ಹರಿದಾಡಿದ್ದವು. ಆದರೆ ಸಿದ್ದರಾಮಯ್ಯ ಅದನ್ನು ಸಂಪೂರ್ಣವಾಗಿ ತಳ್ಳಿಹಾಕಿ, ಐದು ವರ್ಷ ಪೂರ್ತಿ ತಾವೇ ಸಿಎಂ ಆಗಿರುತ್ತೇನೆ ಎಂಬ ದೃಢ ನಿಲುವಿನಲ್ಲಿದ್ದಾರೆ.

## ಹನುಮ ಮಾಲಾಧಾರಿಗಳಿಂದ ಜಾಮೀಯಾ ಮಸೀದಿಗೆ ನುಗ್ಗಲು ಯತ್ನ..!



**ಮಂಡ್ಯ**: ಜಿಲ್ಲೆಯ ಐತಿಹಾಸಿಕ ನಗರಿ ಶ್ರೀರಂಗಪಟ್ಟಣದಲ್ಲಿ ಇಂದು ಹನುಮ ಮಾಲಾಧಾರಿಗಳ ಬೃಹದಾಕಾರದ ಸಂಕೀರ್ತನಾ ಯಾತ್ರೆಯ ನಡೆಯುವ ವೇಳೆ ನೂಕುನುಗ್ಗಲು ನಡೆದಿದೆ.ಯಾತ್ರೆಯಲ್ಲಿ ಭಾಗವಹಿಸಿದ್ದ ಕೆಲವರು ಜಾಮಿಯಾ ಮಸೀದಿ ಪ್ರವೇಶದ್ವಾರದ ಬಳಿ ನುಗ್ಗಲು ಯತ್ನಿಸಿದ ನಡುವೆ, ಪೊಲೀಸರು ಅವರನ್ನ ತಡಿಯಲು ಯತ್ನಿಸಿದರು ಈ ವೇಳೆ ಸ್ಥಳದಲ್ಲಿ ತಳ್ಳಾಟ-ನೂಕಾಟವಾಗಿದೆ. ಹಿಂದೂ ಸಂಘಟನೆಗಳ ನೇತೃತ್ವದಲ್ಲಿ ಆಯೋಜಿಸಲ್ಪಟ್ಟ ಈ ಸಂಕೀರ್ತನಾ ಯಾತ್ರೆಯು 'ಮೂಡಲ ಬಾಗಿಲು ಶ್ರೀ ಆಂಜನೇಯಸ್ವಾಮಿ ದೇಗುಲ' ಮರು ಸ್ಥಾಪನೆಯ ಸಂಕಲ್ಪದೊಂದಿಗೆ ನಡೆದಿತ್ತು. ಯಾತ್ರೆಯ ಮಾರ್ಗವು ನಿಮಿಷಾಂಬ ದೇಗುಲದಿಂದ ಆರಂಭಗೊಂಡು, ಜಾಮಿಯಾ ಮಸೀದಿ ಮುಂಭಾಗದ ರಂಗನಾಥ ಸ್ವಾಮಿ ದೇಗುಲದವರೆಗೆ ಇತ್ತು. ಸ್ಥಳೀಯ ಕೆಲವು ಹಿಂದೂ ಸಂಸ್ಥೆಗಳು ಹಾಗೂ ಭಕ್ತರು ಜಾಮಿಯಾ ಮಸೀದಿ ಸ್ಥಳದಲ್ಲಿ ಹಿಂದೆ 'ಮೂಡಲ ಬಾಗಿಲು ಆಂಜನೇಯಸ್ವಾಮಿ ದೇವಸ್ಥಾನ' ಇತ್ತು ಎಂದು ದೃಢವಾಗಿ ನಂಬುತ್ತಾರೆ. 18ನೇ ಶತಮಾನದಲ್ಲಿ ಟಿಪ್ಪು ಸುಲ್ತಾನನ ಆಳ್ವಿಕೆಯಲ್ಲಿ ಈ ದೇವಾಲಯವನ್ನು ಕೆಡವಲಾಯಿತು ಹಾಗೂ ಅದೇ ಸ್ಥಳದಲ್ಲಿ ಜಾಮಿಯಾ ಮಸೀದಿ ನಿರ್ಮಾಣವಾಗಿದೆ ಎಂದು ಜನರು ಆರೋಪ ಮಾಡುತ್ತಾರೆ.

ಯಾತ್ರೆಯು ಭಕ್ತಿಪೂರ್ವಕವಾಗಿ ಆರಂಭವಾಗಿದ್ದರೂ, ಜಾಮಿಯಾ ಮಸೀದಿ ಸಮೀಪಿಸಿದಂತೆ, ಯಾತ್ರೆಯಲ್ಲಿ ಭಾಗವಹಿಸಿದ್ದ ಕೆಲವರು ಮಸೀದಿ ಪ್ರವೇಶದ್ವಾರದ ಕಡೆಗೆ ನುಗ್ಗಲು ಪ್ರಯತ್ನಿಸಿದರು. "ಜಾಮಿಯಾ ಮಸೀದಿಯಲ್ಲಿರುವವನು ಹನುಮಂತ" ಎಂಬ ಘೋಷಣೆಗಳನ್ನು ಕೂಗಿದ್ದರು ಎಂದು ಸ್ಥಳಿಯರು ಹೇಳಿದ್ದಾರೆ. ಮಸೀದಿ ಆವರಣವನ್ನು ರಕ್ಷಿಸಲು ಮುನ್ನೆಚ್ಚರಿಕೆ ವ್ಯವಸ್ಥೆ ಮಾಡಿದ್ದ ಪೊಲೀಸರು ತಕ್ಷಣ ಈ ಗುಂಪನ್ನು ತಡೆಯಲು ಮುಂದಾದರು. ಇದರಿಂದೀಚೆಗೆ ಮಸೀದಿ ಮುಂದೆ ತಳ್ಳಾಟ-ನೂಕಾಟದ ಪರಿಸ್ಥಿತಿ ಉಂಟಾಯಿತು. ಪೊಲೀಸರು ಸಮರ್ಥವಾಗಿ ಹಸ್ತಕ್ಷೇಪ ನಡೆಸಿ, ಯಾತ್ರಿಕರನ್ನು ಮಸೀದಿಯಿಂದ ದೂರವಿರಿಸಿ, ಯಾತ್ರೆ ಮುಂದುವರೆಸಿ ಎಂದು ಪೊಲೀಸರ ಸೂಚಿಸಿದರು. ಹೀಗಾಗಿ ಸ್ಥಳದಲ್ಲಿ ಸ್ವಲ್ಪ ಸಮಯ ಉದ್ವಿಗ್ನತೆ ಉಂಟಾಗಿ, ಮಾಲಾಧಾರಿಗಳ ನಡುವೆ ನೂಕುನುಗ್ಗಲು ಉಂಟಾಯಿತು.

ಘಟನೆಯ ನಂತರ, ಪೊಲೀಸರು ಸ್ಥಳದಲ್ಲಿನ ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತಂದು, ಮಾಲಾಧಾರಿಗಳನ್ನ ಶಾಂತವಾಗಿರುವಂತೆ ಸೂಚಿಸಿದರು. ಯಾತ್ರೆಯನ್ನು ಯೋಜನೆಯಂತೆ ರಂಗನಾಥಸ್ವಾಮಿ ದೇಗುಲದವರೆಗೆ ಮುಗಿಸಲು ಅನುಮತಿ ನೀಡಲಾಯಿತು. ಈ ಸಂಕೀರ್ತನಾ ಯಾತ್ರೆಗೆ ಮೈಸೂರು, ಕೊಡಗು, ಹಾಸನ, ರಾಮನಗರ ಸೇರಿದಂತೆ ವಿವಿಧ ಜಿಲ್ಲೆಗಳಿಂದ ಹನುಮ ಭಕ್ತರು ಹಾಗೂ ಮಾಲಾಧಾರಿಗಳು ಬೃಹತ್ ಸಂಖ್ಯೆಯಲ್ಲಿ ಭಾಗವಹಿಸಿದ್ದರು. ಈ ಘಟನೆಯಲ್ಲಿ ಪೊಲೀಸರ ತ್ವರಿತ ಹಸ್ತಕ್ಷೇಪವು ದೊಡ್ಡ ಗಲಭೆಯನ್ನ ತಡೆಗಟ್ಟಿದೆ.



ನೆಲಮಂಗಲ ದೇಗನಹಳ್ಳಿ ಗ್ರಾಮದಲ್ಲಿ ಅಯ್ಯಪ ಮಾಲದಾರಿಗಳು ಡೆವಿಲ್ ಚಿತ್ರ 100 ದಿನ ಹೋಡಲಿ ಎಂದು ಪ್ರಾರ್ಥಿಸಿದರು

## ರಾಜ್ಯದಲ್ಲಿ ಹೆಚ್ಚುತ್ತಿರುವ ಡಿವೋರ್ಸ್: ಸರ್ಕಾರದಿಂದ 'ಕೂಡಿ ಬಾಳೋಣ' ಕೌನ್ಸಿಲಿಂಗ್ ಸೆಂಟರ್

**ಬೆಂಗಳೂರು**: ವಿವಾಹಿತ ಜೀವನದಲ್ಲಿ ಹೊಂದಾಣಿಕೆಯ ಸಮಸ್ಯೆಗಳು ಹೆಚ್ಚಾಗುತ್ತಿರುವುದರಿಂದ ಡಿವೋರ್ಸ್ (ವಿಚ್ಛೇದನ) ಪ್ರಕರಣಗಳು ಗಂಭೀರವಾಗಿ ಏರುತ್ತಿರುವ ಪರಿಸ್ಥಿತಿಯನ್ನು ಎದುರಿಸಲು, ಕರ್ನಾಟಕ ರಾಜ್ಯ ಸರ್ಕಾರ 'ಕೂಡಿ ಬಾಳೋಣ' ಎಂಬ ವಿಶೇಷ ಮಾರ್ಗದರ್ಶನ ಕೇಂದ್ರಗಳನ್ನು ಆರಂಭಿಸಲು ಕೈಗೆತ್ತಿಕೊಂಡಿದೆ. ವಿವಾಹದ ಮಹತ್ವವನ್ನು ಮನವರಿಕೆ ಮಾಡಿಕೊಡುವ ಮೂಲಕ ವಿಚ್ಛೇದನದ ಪ್ರಮಾಣವನ್ನು ಕಡಿಮೆ ಮಾಡುವುದು ಈ ಯೋಜನೆಯ ಗುರಿಯಾಗಿದೆ.

ನಗರ ಮತ್ತು ಗ್ರಾಮೀಣ ಪ್ರದೇಶಗಳಲ್ಲಿ ಸಮಾನವಾಗಿ ಹೆಚ್ಚುತ್ತಿರುವ ವಿಚ್ಛೇದನ ಪ್ರಕರಣಗಳು ಸಮಾಜಕ್ಕೆ ಹೊಸ ಸವಾಲಾಗಿದೆ. ಹಲವು ದಂಪತಿಗಳು ಸರಿಯಾದ ಮನೋವೈಜ್ಞಾನಿಕ ಸಲಹೆ ಮತ್ತು ಮಾರ್ಗದರ್ಶನದ ಅಭಾವದಿಂದ ತಮ್ಮ ಸಂಬಂಧವನ್ನು ಸರಿಪಡಿಸಿಕೊಳ್ಳಲು ಅಸಮರ್ಥರಾಗಿ, ಕೊನೆಗೆ ನ್ಯಾಯಾಲಯದ ಬಾಗಿಲು ಕ್ಕಟ್ಟುತ್ತಿದ್ದಾರೆ. ಸೂಕ್ತ ಕೌನ್ಸೆಲಿಂಗ್ ಇಲ್ಲದೆ ಎಷ್ಟೋ ಬಲವಾದ ಸಂಬಂಧಗಳು ಮುರಿದುಬೀಳುತ್ತಿರುವುದು ಚಿಂತೆಯ ವಿಷಯವಾಗಿದೆ. ಈ ಸಮಸ್ಯೆಯ ಗಂಭೀರತೆಯನ್ನು ಗುರುತಿಸಿದ ರಾಷ್ಟ್ರೀಯ ಮಹಿಳಾ ಆಯೋಗವು ರಾಜ್ಯ ಸರ್ಕಾರಕ್ಕೆ ಸೂಕ್ತ ಸಲಹೆ ನೀಡಿತ್ತು. ಈ ಸೂಚನೆಗಳ ಆಧಾರದ ಮೇಲೆ, ರಾಜ್ಯ ಮಹಿಳಾ ಆಯೋಗವು ವಿವರವಾದ ಪ್ರಸ್ತಾಪವನ್ನು ಸರ್ಕಾರಕ್ಕೆ ಸಲ್ಲಿಸಿತ್ತು.

ಈ ಪ್ರಸ್ತಾಪವನ್ನು ಕೂಲಂಕಷವಾಗಿ ಪರಿಶೀಲಿಸಿದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯು ಅದಕ್ಕೆ ತನ್ನ ಅನುಮೋದನೆ ನೀಡಿದೆ. ಇಲಾಖೆಯು ಈಗ 'ಕೂಡಿ ಬಾಳೋಣ' ಕೌನ್ಸೆಲಿಂಗ್ ಸೆಂಟರ್‌ಗಳನ್ನು ಸ್ಥಾಪಿಸಲು ಅಧಿಕೃತ ಆದೇಶವನ್ನು ಹೊರಡಿಸಿದೆ. ಈ ಕೇಂದ್ರಗಳನ್ನು ರಾಷ್ಟ್ರೀಯ ಮಹಿಳಾ ಆಯೋಗದ ನಿರ್ದೇಶಿಕೆಗಳನ್ನು ಅನುಸರಿಸಿ, ಸರ್ಕಾರದ ಅಡಿಯಲ್ಲೇ ನಡೆಸಲಾಗುವುದು.

'ಕೂಡಿ ಬಾಳೋಣ' ಯೋಜನೆಯ ಮೂಲಕ ಸರ್ಕಾರ ಹಲವಾರು ಪ್ರಮುಖ ಗುರಿಗಳನ್ನು ಹೊಂದಿದೆ: ವಿವಾಹದ ಮಹತ್ವದ ಬಗ್ಗೆ ಮನವರಿಕೆ: ದಾಂಪತ್ಯ ಜೀವನದಲ್ಲಿ ಪರಸ್ಪರ ಗೌರವ, ತಾಳ್ಮೆ ಮತ್ತು ಬಲವಾದ ಸಂವಹನದ ಪ್ರಾಮುಖ್ಯತೆಯನ್ನು ಜನರಿಗೆ ತಲುಪಿಸುವುದು.

ವಿಚ್ಛೇದನ ಪ್ರಮಾಣವನ್ನು ಕಡಿಮೆ ಮಾಡುವುದು: ಸಂಬಂಧದಲ್ಲಿ ಉಂಟಾಗುವ ಗೊಂದಲಗಳನ್ನು ಆರಂಭದ ಹಂತದಲ್ಲೇ ಗುರುತಿಸಿ, ಪರಿಣಾಮಕಾರಿ ಕೌನ್ಸೆಲಿಂಗ್ ಮೂಲಕ ದಂಪತಿಗಳನ್ನು ಪುನರ್ಬಂಧಿಸುವ ಪ್ರಯತ್ನ.

ಮುಂಜಾನೆಯ ಮಾರ್ಗದರ್ಶನ: ಮದುವೆಗೆ ಮುಂಚೆಯೇ ಯುವಕ-ಯುವತಿಯರಿಗೆ ಸಂವಹನ ಕೌಶಲ್ಯ, ಸಂಬಂಧ ನಿರ್ವಹಣೆ ಮತ್ತು ವಾಸ್ತವಿಕ ನಿರೀಕ್ಷೆಗಳ ಬಗ್ಗೆ ಮಾರ್ಗದರ್ಶನ ನೀಡುವ ಸಂವಹನ ಕೇಂದ್ರಗಳನ್ನು ಸ್ಥಾಪಿಸುವುದು.

ಈ ಯೋಜನೆಯನ್ನು ಸಮಗ್ರವಾಗಿ ಕಾರ್ಯರೂಪಕ್ಕೆ ತರಲು ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿ ಈ ಕೌನ್ಸೆಲಿಂಗ್ ಕೇಂದ್ರಗಳನ್ನು ಸ್ಥಾಪಿಸಲು ಯೋಜನೆ ರೂಪುಗೊಳ್ಳುತ್ತಿದೆ. ಇದು ಹೆಚ್ಚಿನ ಜನರನ್ನು ತಲುಪಲು ಸಹಾಯ ಮಾಡುತ್ತದೆ.

ಪ್ರಸ್ತುತ, ಈ ಕೇಂದ್ರಗಳು ಕಾರ್ಯನಿರ್ವಹಿಸಲು ಸೂಕ್ತ ಸ್ಥಳಗಳನ್ನು ಗುರುತಿಸುವ ಮತ್ತು ತರಬೇತಿ ಪಡೆದ ಕೌನ್ಸೆಲಿಂಗ್ ಸಿಬ್ಬಂದಿಯನ್ನು ನೇಮಿಸಿಕೊಳ್ಳುವ ಪ್ರಕ್ರಿಯೆ ಸಾಗುತ್ತಿದೆ. ಮನೋವಿಜ್ಞಾನಿಗಳು ಮತ್ತು ಸಮಾಜ ಕಾರ್ಯಕರ್ತರನ್ನು ಈ ಸಿಬ್ಬಂದಿಯಾಗಿ ಸೇರಿಸಿಕೊಳ್ಳಲು ಯೋಜನೆ ಇದೆ.

'ಕೂಡಿ ಬಾಳೋಣ' ಯೋಜನೆಯು ವೈಯಕ್ತಿಕ ಸಂಬಂಧಗಳಿಗೆ ಸರ್ಕಾರದ ಮಟ್ಟದಲ್ಲಿ ನೀಡಲಾಗುವ ರಚನಾತ್ಮಕ ಮತ್ತು ಪ್ರಾಯೋಗಿಕ ಪರಿಹಾರ. ವಿವಾಹಿತ ಜೀವನದ ಸವಾಲುಗಳನ್ನು ಅರ್ಥಮಾಡಿಕೊಂಡು, ಸಂವಹನದ ಅಂತರವನ್ನು ದಾಟಲು ದಂಪತಿಗಳಿಗೆ ಸಹಾಯ ಮಾಡುವ ಮೂಲಕ, ಕುಟುಂಬವನ್ನು ಸಮಾಜದ ಬಲವಾದ ಅಡಿಪಾಯವಾಗಿ ಉಳಿಸಿಕೊಳ್ಳುವ ಗುರಿ ಹೊಂದಿದೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.